# LOK ADALATH AWARENESS JATHA 07-07-2023

### ಇಂದು ಆರ್.ಎಲ್. ಲಾ ಕಾಲೇಜು ವಿದ್ಯಾರ್ಥಿಗಳಿಂದ

## ಲೋಕ್ ಅದಾಲತ್ ಜಾಗೃತಿ ಜಾಥಾ

**ದಾವಣಗೆರೆ:** ನಗರದ ಆರ್.ಎಲ್. ಕಾನೂನು ಕಾಲೇಜು ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ ಇವರ ಸಹಯೋಗದೊಂದಿಗೆ ದಿ.8 ರಂದು ನಡೆಯುವ ಲೋಕ್ ಅದಾಲತ್ ಪ್ರಯುಕ್ತ ಜಾಗೃತಿ ಜಾಥಾವನ್ನು ದಿ. 7 ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಆರ್.ಎಲ್. ಕಾನೂನು ಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ಅವರು ಜಾಥಾವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರಣ್ಣನವರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್, ಕಾರ್ಯದರ್ಶಿ ಎಸ್. ಬಸವರಾಜ್, ಉಪಾಧ್ಯಕ್ಷ ಜಿ.ಕೆ. ಬಸವರಾಜ್ ಗೋಪನಾಳ್, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್ ಆಗಮಿಸುವರು. ಆರ್.ಎಲ್. ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ. ಜಿ.ಎಸ್. ಯತೀಶ್ ಉಪಸ್ಥಿತರಿರುವರು.




R.L. LAW COLLEGE
KA 17 Z 4622


GPS Map Camera
Davanagere, Karnataka, India
FW88+XXG, Davangere - Harihar Rd, Prince Jayachamaraja Wodeyar, Davanagere, Karnataka 577001, India
Lat 14.467305°
Long 75.917405°
07/07/23 11:02 AM GMT +05:30
Google


"Meditation – Before you learn how to meditate, you must unlearn what you think meditation might be."
IDRIES SHAH
GPS Map Camera
Davanagere, Karnataka, India
FW89+X84, Prince Jayachamaraja Wodeyar, Davanagere, Karnataka 577002, India
Lat 14.467221°
Long 75.918355°
07/07/23 11:01 AM GMT +05:30
Google

ಪ್ರಜಾ ಪ್ರಗತಿ



ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ಜಿಲ್ಲಾ ವಕೀಲರ ಸಂಘದ ವತಿಯಿಂದ ಶುಕ್ರವಾರ ನಗರದ ರಾಜನಹಳ್ಳಿ ಲಕ್ಷ್ಮಣ ಶೆಟ್ಟಿ ಕಾನೂನು ಕಾಲೇಜಿನಲ್ಲಿ ಲೋಕ್ ಅದಾಲತ್‌ನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್.ಹೆಗಡೆ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಈ ವೇಳೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್ ಕುಮಾರ್, ಕಾರ್ಯದರ್ಶಿ ಎಸ್. ಬಸವರಾಜ್, ಉಪಾಧ್ಯಕ್ಷ ಜಿ.ಕೆ ಬಸವರಾಜ್ ಗೋಪನಾಳ್, ಸಹ ಕಾರ್ಯದರ್ಶಿ ಎ.ಎಸ್ ಮಂಜುನಾಥ್, ಪಂಕಜ್, ವಿದ್ಯಾಧರ್, ಕಾನೂನು ಕಾಲೇಜಿನ ಪ್ರಾಶುಪಾಲರಾದ ಡಾ.ಜಿ.ಎಸ್ ಯತೀಶ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Prajapragathi Edition
Jul 8, 2023 Page No. 2
Powered by : eReleGo.com

# ಪ್ರಕರಣಗಳ ಶೀಘ್ರ ಇತ್ಯರ್ಥಕ್ಕಾಗಿ ಲೋಕ್ ಅದಾಲತ್



**ದಾವಣಗೆರೆ:** ಅತೀ ಶೀಘ್ರದಲ್ಲಿ ಮತ್ತು ಕಡಿಮೆ ಖರ್ಚಿನಲ್ಲಿ ಎಲ್ಲರಿಗೂ ನ್ಯಾಯ ಸಿಗಲಿ ಎಂಬುದೇ ಲೋಕ್ ಅದಾಲತ್‌ನ ಉದ್ದೇಶ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಹೇಳಿದರು. ದಾವಣಗೆರೆ ಆರ್.ಎಲ್.ಕಾನೂನು ಕಾಲೇಜು, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ನಗರದ ಆರ್.ಎಲ್.ಕಾನೂನು ಕಾಲೇಜು ಆವರದಲ್ಲಿ ಹಮ್ಮಿಕೊಂಡಿದ್ದ ಲೋಕ್ ಅದಾಲತ್ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು. ವ್ಯಾಜ್ಯಗಳ ಕುರಿತು ಸಣ್ಣ ಪುಟ್ಟ ಮನಸ್ತಾಪಗಳು ಇರುತ್ತವೆ. ಅವುಗಳನ್ನು ಲೋಕ್ ಅದಾಲತ್‌ನಲ್ಲಿ ತೀರ್ಮಾನ ಮಾಡಿಕೊಳ್ಳುವುದರಿಂದ ಪರಸ್ಪರ ಸೌಹಾರ್ಧತೆ ಉಳಿದು ಬಾಂಧವ್ಯ ಬೆಳೆಯುತ್ತದೆ. ಅತೀ ಶೀಘ್ರ ಹಾಗೂ ಅತೀ ಕಡಿಮೆ ಖರ್ಚಿನಲ್ಲಿ ಲೋಕ್ ಅದಾಲತ್‌ನಲ್ಲಿ ತೀರ್ಮಾನ ಮಾಡಿಕೊಳ್ಳಬಹುದಾಗಿದ್ದು, ಈ ಉದ್ದೇಶದಿಂದಲೇ ಲೋಕ್ ಅದಲಾತ್‌ನ್ನು ನಡೆಸಲಾಗುತ್ತದೆ ಎಂದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಎಂ.ಕರಣ್ಣನವರ್ ಮಾತನಾಡಿ, ಪ್ರತಿಯೊಂದು ಪ್ರಕರಣಕ್ಕೂ ನ್ಯಾಯಾಲಯಕ್ಕೆ ಹೋಗಿ ಬಗೆಹರಿಸಿಕೊಳ್ಳುವುದು ಬೇಡ ಎಂಬ ಉದ್ದೇಶದಿಂದ ಲೋಕ್ ಅದಾಲತ್ ನಡೆಸಲಾಗುತ್ತಿದೆ ಎಂದರು.ಭಾರತದ ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ನ್ಯಾಯಾ ಸಿಗಬೇಕು ಎಂಬ ಅವಕಾಶ ಇದೆ. ಈ ನಿಟ್ಟಿನಲ್ಲಿ 1987ರಲ್ಲಿ ಕಾನೂನು ಸೇವಾ ಪ್ರಾಧಿಕಾರ ಕಾನೂನನ್ನು ಜಾರಿಗೆ ತರಲಾಗಿದೆ. ಲೋಕ್ ಅದಾಲತ್‌ನಲ್ಲಿ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುವುದು. ನ್ಯಾಯವನ್ನು ಹರಿಸಿ ಬಂದ ಜನರಿಗೆ ಕಾನೂನಿನ ಅರಿವು ಮತ್ತು ನೆರವನ್ನು ನೀಡುವುದು ಕಾನೂನು ಸೇವಾ ಪ್ರಾಧಿಕಾರದ ಉದ್ದೇಶವಾಗಿದೆ ಎಂದು ಮಾಹಿತಿ ನೀಡಿದರು.ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್ ಮಾತನಾಡಿ, ರಾಜ್ಯದಲ್ಲಿ ಪ್ರಥಮ ಬಾರಿಗೆ ಆರ್.ಎಲ್.ಕಾನೂನು ಕಾಲೇಜು ವಿದ್ಯಾರ್ಥಿಗಳು ಲೋಕ್ ಅದಾಲತ್ ಜಾಗೃತಿ ಜಾಥಾ ಆಯೋಜಿಸಿರುವುದು ಶ್ಲಾಘನೀಯ. ಆ ಮೂಲಕ ವಿದ್ಯಾರ್ಥಿಗಳು ಸಾಮಾಜಿಕ ಅರಿವು ಮೂಡಿಸುವಲ್ಲಿ ಮತ್ತು ಸಾಮಾಜಿಕ ನ್ಯಾಯದ ಅನುಷ್ಠಾನದಲ್ಲಿ ಪಾಲ್ಗೊಂಡಿರುವುದು ಪ್ರಶಂಶನೀಯ ಎಂದು ಹೇಳಿದರು. ಕಾಲೇಜಿನ ಪ್ರಾಂಶುಪಾಲ ಯತೀಶ್ ಮಾತನಾಡಿ, ಕಾಲಕಾಲಕ್ಕೆ ಲೋಕ್ ಅದಾಲತ್ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸುತ್ತಿರುವುದು ಕ್ರಾಂತಿಕಾರ ಹೆಜ್ಜೆಯಾಗಿದ್ದು, ಆ ಮೂಲಕ ಸಾಮಾಜಿಕ ಸಾಮರಸ್ಯವನ್ನು ಕಾಪಾಡಬಹುದು. ಗ್ರಾಮಮಟ್ಟದಲ್ಲೂ ಈ ಬಗ್ಗೆ ಅವಶ್ಯಕವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ್, ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಹಿರಿಯ ವಕೀಲರಾದ ಆಂಜನೇಯ ಗುರೂಜಿ, ವಾಗೀಶ್ ಕಟಿಗೆಹಳ್ಳಿ ಮಠ, ಸಹಾಯಕ ಪ್ರಾಧ್ಯಾಪಕರಾದ ವಿದ್ಯಾಧರ ವೇದವರ್ಮ, ಪ್ರದೀಪ್, ಅರ್ಚನಾ, ವ್ಯವಸ್ಥಾಪಕ ಲಿಂಗರಾಜ್, ಸಹಾಯಕ ಲೈಬ್ರೇರಿಯನ್ ಜೈಶಂಕರ್ ಇತರರು ಇದ್ದರು.

ished and Owned by : J.S.Veeresh, Printed at : MANJU MUDRANA, Kunduvada Kere Road, Near Kadappa Bavi, D
Published at : Davangere Old Bus Stand, Shop Door No.3/2-3, Davangere-577002, Davangere Dist. Karnataka Edit